1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್ ಸಿ , ನ್ಯಾಯಾಧೀಶರವರ

ನ್ಯಾಯಾಲಯ , ಚನ್ನಗಿರಿ .

ಸಿಸಿ ನಂ.**545-2023**

ಹೆಸರುಃ ಎಂ.ಎನ್ ನಾಗರಾಜಪ್ಪ ಚಾಸಾಃ 4

ತಂದೆಃ ನಾರಪ್ಪ ಫ್ರಾಸಾ: 3

ವಯಸ್ಸುಃ 64

ಉದ್ಯೋಗಃ ವ್ಯವಸಾಯ

ವಾಸ ಸ್ಥಳಃ ಮುದ್ದೇನಹಳ್ಳಿ, ಚನ್ನಗಿರಿ ತಾಲ್ಲೂಕು.

ಸಾಕ್ಷಿಗೆ ದಿನಾಂಕಃ 01-07-2023 ರಂದು ಪ್ರಮಾಣ ವಚನ

**ಮುಖ್ಯ ವಿಚಾರಣೆಃ** ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದಃ

ಸಾಕ್ಷಿಯು ಈಗ ಮಹಜರ್ ನ್ನು ನೋಡುತ್ತಿದ್ದು ಅದರಲ್ಲಿರುವ ತನ್ನ ಸಹಿಯನ್ನು ಗುರುತಿಸಿರುತ್ತಾರೆ. ಸದರಿ ಮಾಲು ಅಮಾನತ್ತು ಮಹಜರ್ ನ್ನು ನಿಶಾನೆ ಪಿ 9 ಎಂದು ಗುರುತಿಸಲಾಯಿತು . ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಶಾನೆ ಪಿ 9(ಎ ) ಎಂದು ಗುರುತಿಸಲಾಯಿತು. ಅದು ಯಾವ ದಾಖಲೆ ಎಂದು ನನಗೆ ಗೊತ್ತಿಲ್ಲ, ಸದರಿ ಸಹಿಯನ್ನು ಚನ್ನಗಿರಿ ಪೊಲೀಸ್ ಠಾಣೆಯಲ್ಲಿ ಮಾಡಿರುತ್ತೇನೆ. ಸದರಿ ಮಹಜರ್ ನಲ್ಲಿ ಬರೆದಿರುವ ವಿಚಾರ ನನಗೆ ಗೊತ್ತಿಲ್ಲ. ನನ್ನ ಜೊತೆ ಯಾರು ಸಹಿ ಮಾಡಿದ್ದಾರೆ ಎಂದು ನನಗೆ ಗೊತ್ತಿಲ್ಲ. ಪೊಲೀಸರು ಏನನ್ನು ವಶಪಡಿಸಿಕೊಂಡಿರುವುದಿಲ್ಲ.

ನಿ ಪಿ 9 ರ ಕಾಲಕ್ಕೆ ಒಂದು ಪೋಟೋ ವನ್ನು ಪೊಲೀಸರು ತೆಗೆದಿದ್ದು ಅದನ್ನು ಸಾಕ್ಷಿಯು ಗುರುತಿಸಿರುತ್ತಾರೆ . ಸದರೆ ಪೋಟೋವನ್ನು ಈಗಾಗಲೇ ನಿ ಪಿ 10 ಎಂದು ಗುರುತಿಸಲಾಗಿದೆ . ಪೊಲೀಸರ ಕೋರಿಕೆಯ ಮೇರೆಗೆ ನಾನು ಪೋಟೋದಲ್ಲಿ ನಿಂತಿರುತ್ತೇನೆ . ಯಾವ ಕಾರಣಕ್ಕೆ ತೆಗೆದಿರುತ್ತಾರೆ ಎಂದು ನನಗೆ ಗೊತ್ತಿಲ್ಲ .

ಸಾಕ್ಷಿಯು ಈಗ ಮತ್ತೊಂದು ಮಹಜರ್ ನ್ನು ನೋಡುತ್ತಿದ್ದು ಅದರಲ್ಲಿರುವ ತನ್ನ ಸಹಿಯನ್ನು ಗುರುತಿಸಿರುತ್ತಾರೆ. ವಶಪಡಿಸಿಕೊಂಡ ಸರವನ್ನು ಪರಿಶೀಲಿಸಿದ ಮಹಜರ್ ನ್ನು ಈಗಾಗಲೇ ನಿಶಾನೆ ಪಿ 4 ಎಂದು ಗುರುತಿಸಲಾಗಿದೆ . ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಶಾನೆ ಪಿ 4 (ಬಿ ) ಎಂದು ಗುರುತಿಸಲಾಯಿತು. ಅದು ಯಾವ ದಾಖಲೆ ಎಂದು ನನಗೆ ಗೊತ್ತಿಲ್ಲ, ಸದರಿ ಸಹಿಯನ್ನು ಚನ್ನಗಿರಿ ಪೊಲೀಸ್ ಠಾಣೆಯಲ್ಲಿ ಮಾಡಿರುತ್ತೇನೆ. ಸದರಿ ಮಹಜರ್ ನಲ್ಲಿ ಬರೆದಿರುವ ವಿಚಾರ ನನಗೆ ಗೊತ್ತಿಲ್ಲ. ನನ್ನ ಜೊತೆ ಯಾರು ಸಹಿ ಮಾಡಿದ್ದಾರೆ ಎಂದು ನನಗೆ ಗೊತ್ತಿಲ್ಲ. ಪೊಲೀಸರು ಏನನ್ನು ವಶಪಡಿಸಿಕೊಂಡಿರುವುದಿಲ್ಲ.

ನಿ ಪಿ 5 ನ್ನು ಸಾಕ್ಷಿಯು ನೋಡಿ ಗುರುತಿಸಿರುತ್ತಾರೆ .ಪೊಲೀಸರ ಕೋರಿಕೆಯ ಮೇರೆಗೆ ನಾನು ಪೋಟೋದಲ್ಲಿ ನಿಂತಿರುತ್ತೇನೆ . ಯಾವ ಕಾರಣಕ್ಕೆ ತೆಗೆದಿರುತ್ತಾರೆ ಎಂದು ನನಗೆ ಗೊತ್ತಿಲ್ಲ .

ಸಾಕ್ಷಿಯು ಈಗ ಅಮಾನತ್ತು ಮಹಜರ್ ನ್ನು ನೋಡುತ್ತಿದ್ದು ಅದರಲ್ಲಿರುವ ತನ್ನ ಸಹಿಯನ್ನು ಗುರುತಿಸಿರುತ್ತಾರೆ. ಸದರಿ ಅಮಾನತ್ತು ಮಹಜರ್ ನ್ನು ನಿಶಾನೆ ಪಿ 11 ಎಂದು ಗುರುತಿಸಲಾಯಿತು . ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಶಾನೆ ಪಿ 11(ಎ ) ಎಂದು ಗುರುತಿಸಲಾಯಿತು. ಅದು ಯಾವ ದಾಖಲೆ ಎಂದು ನನಗೆ ಗೊತ್ತಿಲ್ಲ, ಸದರಿ ಸಹಿಯನ್ನು ಚನ್ನಗಿರಿ ಪೊಲೀಸ್ ಠಾಣೆಯಲ್ಲಿ ಮಾಡಿರುತ್ತೇನೆ. ಸದರಿ ಮಹಜರ್ ನಲ್ಲಿ ಬರೆದಿರುವ ವಿಚಾರ ನನಗೆ ಗೊತ್ತಿಲ್ಲ. ನನ್ನ ಜೊತೆ ಯಾರು ಸಹಿ ಮಾಡಿದ್ದಾರೆ ಎಂದು ನನಗೆ ಗೊತ್ತಿಲ್ಲ. ಪೊಲೀಸರು ಏನನ್ನು ವಶಪಡಿಸಿಕೊಂಡಿರುವುದಿಲ್ಲ.

ನಿ ಪಿ 11 ರ ಕಾಲಕ್ಕೆ ಒಂದು ಪೋಟೋ ವನ್ನು ಪೊಲೀಸರು ತೆಗೆದಿದ್ದು ಅದನ್ನು ಸಾಕ್ಷಿಯು ಗುರುತಿಸಿರುತ್ತಾರೆ . ಸದರೆ ಪೋಟೋವನ್ನು ಈಗಾಗಲೇ ನಿ ಪಿ 12 ಎಂದು ಗುರುತಿಸಲಾಗಿದೆ . ಪೊಲೀಸರ ಕೋರಿಕೆಯ ಮೇರೆಗೆ ನಾನು ಪೋಟೋದಲ್ಲಿ ನಿಂತಿರುತ್ತೇನೆ . ಯಾವ ಕಾರಣಕ್ಕೆ ತೆಗೆದಿರುತ್ತಾರೆ ಎಂದು ನನಗೆ ಗೊತ್ತಿಲ್ಲ .

**(ಈ ಹಂತದಲ್ಲಿ ಸಾಕ್ಷಿಯು ಮಹಜರ್ ಗಳಿಗೆ ಪ್ರತಿಕೂಲ ಸಾಕ್ಷ್ಯ ನುಡಿದಿದ್ದರಿಂದ ಮಾನ್ಯ ಸಹಾಯಕರ ಸರ್ಕಾರಿ ಅಭಿಯೋಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯಾಗಿ**

**ಪರಿಗಣಿಸಲು ಕೇಳಿಕೊಂಡಿದ್ದು, ಮಹಜರ್ ಗಳನ್ನು ನೋಡಲಾಗಿ ಸಾಕ್ಷಿಯು ಮಹಜರ್ ಗಳಿಗೆ ಗ ಪ್ರತಿಕೂಲ ಸಾಕ್ಷಿ ನುಡಿದಿರುವುದು ಕಂಡು ಬರುತ್ತದೆ. ಆದ್ದರಿಂದ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀಸವಾಲು ಮಾಡಲು ಅನುಮತಿ ನೀಡಲಾಯಿತು.)**

**ಪಾಟಿ ಸವಾಲುಃ ಮಾನ್ಯ ಸಹಾಯಕ ಸರ್ಕಾರಿ ಅಬಿಯೋಜಕರವರಿಂದಃ**

ದಿಃ 14-01-2023 ರಂದು ಬಸವೇಶ್ವರ ನಗರದ ಅಣ್ಣಮ್ಮ ಪ್ರೌಢಶಾಲೆಗೆ ಹೋಗುವ ಅಡ್ಡ ಕ್ರಾಸ್ ನಲ್ಲಿ ಆರೋಪಿತರು ತೋರಿಸಿದ ಸ್ಥಳದಲ್ಲಿ ಪೊಲೀಸರು ನಾನು ಮತ್ತು 5 ರವರ ಸಮಕ್ಷಮ ಬೆಳಗ್ಗೆ 10.15 ರಿಂದ 10.50 ಗಂಟೆಯವರೆಗೆ ನಿಪಿ 9 ರಂತೆ ಪಂಚನಾಮೆಯನ್ನು ಜರುಗಿಸಿರುತ್ತಾರೆ ಎಂದರೆ ಸರಿಯಲ್ಲ . ನನ್ನ ಜೊತೆ ಚಾಸಾ 5 ರವರು ಸಹಿ ಮಾಡಿರುತ್ತಾರೆ ಎಂದರೆ ಸರಿಯಲ್ಲ . ಸದರಿ ಸಮಯದಲ್ಲಿ ಪೊಲೀಸರು ಆರೋಪಿತರಿಂದ ಒಂದು ಸರ ಮತ್ತು ಮೊಬೈಲ್ ನ್ನು ವಶಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ . ನಿ ಪಿ 9 ನ್ನು ಜರುಗಿಸುವ ಕಾಲಕ್ಕೆ ನಿ ಪಿ 10 ರಂತೆ ಪೋಟೋವನ್ನು ತೆಗೆದಿರುತ್ತಾರೆ ಎಂದರೆ ಸರಿಯಲ್ಲ .

ದಿಃ 14-01-2023 ರಂದು ಪೊಲೀಸ್ ಠಾಣೆಯಲ್ಲಿ ನನ್ನ ಮತ್ತು ಚಾಸಾ 1 ಹಾಗೂ ಚಾಸಾ 5 ರವರ ಸಮಕ್ಷಮ ಬೆಳಗ್ಗೆ 11.30 ರಿಂದ 12.00 ಗಂಟೆಯವರೆಗೆ ನಿಪಿ 4 ರಂತೆ ಪಂಚನಾಮೆಯನ್ನು ಜರುಗಿಸಿರುತ್ತಾರೆ ಎಂದರೆ ಸರಿಯಲ್ಲ . ನನ್ನ ಜೊತೆ ಚಾಸಾ 1 ಮತ್ತು ಚಾಸಾ 5 ರವರು ಸಹಿ ಮಾಡಿರುತ್ತಾರೆ ಎಂದರೆ ಸರಿಯಲ್ಲ . ನಿ ಪಿ 4 ರ ಸಮಯದಲ್ಲಿ ಚಾಸಾ 4 ರವರು ಸರವನ್ನು ಪರಿಶೀಲಿಸಿ ಬಂಗಾರದ ಸರ ಅಲ್ಲ ಎಂದು ಹೇಳಿರುತ್ತಾರೆ ಎಂದರೆ ಸರಿಯಲ್ಲ . ಸದರಿ ಸಮಯದಲ್ಲಿ ನಿ ಪಿ 5 ರಂತೆ ಒಂದುಪೋಟೋವನ್ನು ತೆಗೆದಿರುತ್ತಾರೆ ಎಂದರೆ ಸರಿಯಲ್ಲ .

**ಪಾಟೀ ಸವಾಲು – ಆರೋಪಿತರ ಪರ ವಕೀಲರಿಂದ - ಇರುವುದಿಲ್ಲ.**

**ಮರು ವಿಚಾರಣೆ ಇಲ್ಲ.**

**( ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿಕೆಯನ್ನು ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಪರಿಸಲಾಯಿತು.)**

**ಓ.ಹೇ.ಕೇ. ಸರಿ ಇದೆ.**

**01 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್ ಸಿ,**

**ಚನ್ನಗಿರಿ.**

1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್ ಸಿ , ನ್ಯಾಯಾಧೀಶರವರ

ನ್ಯಾಯಾಲಯ , ಚನ್ನಗಿರಿ .

ಸಿಸಿ ನಂ.**545-2023**

ಹೆಸರುಃ ಮಂಜುಳಾ ಹೆಚ್.ವಿ . ಚಾಸಾಃ 1

ಗಂಡಃ ಮಂಜುನಾಥ. ಬಿ.ಎಸ್ ಫ್ರಾಸಾ: 1

ವಯಸ್ಸುಃ 46

ಉದ್ಯೋಗಃ ಗೃಹಿಣಿ

ವಾಸ ಸ್ಥಳಃ ಮುದ್ದೇನಹಳ್ಳಿ , ಚನ್ನಗಿರಿ ತಾಲ್ಲೂಕು.

ಸಾಕ್ಷಿಗೆ ದಿನಾಂಕಃ 01-07-2023 ರಂದು ಪ್ರಮಾಣ ವಚನ

**ಮುಖ್ಯ ವಿಚಾರಣೆಃ** ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದಃ

2 ನೇ ಆರೋಪಿ ನಮ್ಮ ತೋಟದಲ್ಲಿ ಕೆಲಸ ಮಾಡುತ್ತಾರೆ . 1 ಮತ್ತು 2 ನೇ ಆರೋಪಿ ನಮ್ಮ ತೋಟದಲ್ಲಿ ಕೆಲಸ ಮಾಡುತ್ತಿದ್ದರು . ಈ ಪ್ರಕರಣದ ಬಗ್ಗೆ ನನಗೆ ಯಾವುದೇ ಮಾಹಿತಿ ಇರುವುದಿಲ್ಲ . ಆರೋಪಿತರು ಮತ್ತು ನಮ್ಮ ಮಧ್ಯೆ ಗಲಾಟೆಯಾದ ವಿಚಾರವಾಗಿ ಬಗೆಹರಿಸಿಕೊಳ್ಳಲು ನಾವು ಪೊಲೀಸ್ ಠಾಣೆಗೆ ಹೋದಾಗ ಪೊಲೀಸರು ಕೆಲವು ದಾಖಲೆಗಳ ಮೇಲೆ ನನ್ನ ಸಹಿಗಳನ್ನು ಪಡೆದಿರುತ್ತಾರೆ . ಅವುಗಳು ಯಾವ ದಾಖಲೆಗಳು ಎಂದು ನನಗೆ ಗೊತ್ತಿಲ್ಲ .

2) ಸಾಕ್ಷಿಯು ಒಂದು ದಾಖಲೆಯನ್ನು ನೋಡುತ್ತಿದ್ದು ಅದು ದೂರಾಗಿದ್ದು , ಸಾಕ್ಷಿಯು ಅದರಲ್ಲಿರುವ ತನ್ನ ಸಹಿಯನ್ನು ಗುರುತಿಸಿರುತ್ತಾರೆ. ಸದರಿ ದೂರನ್ನು ನಿ ಪಿ 1 , ಹಾಗೂ ಸಾಕ್ಷಿಯ ಸಹಿಯನ್ನು ನಿಶಾನೆ ಪಿ 1( ಎ) ಎಂದು ಗುರುತಿಸಲಾಯಿತು. ಅದು ಯಾವ ದಾಖಲೆ ಎಂದು ನನಗೆ ಗೊತ್ತಿಲ್ಲ.

3) ಸಾಕ್ಷಿಯು ಈಗ ಮಹಜರ್ ನ್ನು ನೋಡುತ್ತಿದ್ದು ಅದರಲ್ಲಿರುವ ತನ್ನ ಸಹಿಯನ್ನು ಗುರುತಿಸಿರುತ್ತಾರೆ. ಮಹಜರ್ ನ್ನು ನಿಶಾನೆ ಪಿ 2 ಎಂದು ಗುರುತಿಸಲಾಯಿತು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಶಾನೆ ಪಿ 2 (ಎ) ಎಂದು ಗುರುತಿಸಲಾಯಿತು.

ಅದು ಯಾವ ದಾಖಲೆ ಎಂದು ನನಗೆ ಗೊತ್ತಿಲ್ಲ, ಸದರಿ ಸಹಿಯನ್ನು ಚನ್ನಗಿರಿ ಪೊಲೀಸ್ ಠಾಣೆಯಲ್ಲಿ ಮಾಡಿರುತ್ತೇನೆ. ಸದರಿ ಮಹಜರ್ ನಲ್ಲಿ ಬರೆದಿರುವ ವಿಚಾರ ನನಗೆ ಗೊತ್ತಿಲ್ಲ. ನನ್ನ ಜೊತೆ ಯಾರು ಸಹಿ ಮಾಡಿದ್ದಾರೆ ಎಂದು ನನಗೆ ಗೊತ್ತಿಲ್ಲ.

4) ನಿ ಪಿ 2 ರ ಕಾಲಕ್ಕೆ ಒಂದು ಪೋಟೋ ವನ್ನು ಪೊಲೀಸರು ತೆಗೆದಿದ್ದು ಅದನ್ನು ಸಾಕ್ಷಿಯು ಗುರುತಿಸಿದ್ದರಿಂದ ಪೋಟೋವನ್ನು ನಿ ಪಿ 3 ಎಂದು ಗುರುತಿಸಲಾಯಿತು . ಪೊಲೀಸರ ಕೋರಿಕೆಯ ಮೇರೆಗೆ ನಾನು ಪೋಟೋದಲ್ಲಿ ನಿಂತಿರುತ್ತೇನೆ . ಯಾವ ಕಾರಣಕ್ಕೆ ತೆಗೆದಿರುತ್ತಾರೆ ಎಂದು ನನಗೆ ಗೊತ್ತಿಲ್ಲ .

5) ಸಾಕ್ಷಿಯು ಈಗ ಮತ್ತೊಂದು ಮಹಜರ್ ನ್ನು ನೋಡುತ್ತಿದ್ದು ಅದರಲ್ಲಿರುವ ತನ್ನ ಸಹಿಯನ್ನು ಗುರುತಿಸಿರುತ್ತಾರೆ. ವಶಪಡಿಸಿಕೊಂಡ ಸರವನ್ನು ಪರಿಶೀಲಿಸಿದ ಮಹಜರ್ ನ್ನು ನಿಶಾನೆ ಪಿ 4 ಎಂದು ಗುರುತಿಸಲಾಯಿತು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಶಾನೆ ಪಿ 4 (ಎ) ಎಂದು ಗುರುತಿಸಲಾಯಿತು. ಅದು ಯಾವ ದಾಖಲೆ ಎಂದು ನನಗೆ ಗೊತ್ತಿಲ್ಲ, ಸದರಿ ಸಹಿಯನ್ನು ಚನ್ನಗಿರಿ ಪೊಲೀಸ್ ಠಾಣೆಯಲ್ಲಿ ಮಾಡಿರುತ್ತೇನೆ. ಸದರಿ ಮಹಜರ್ ನಲ್ಲಿ ಬರೆದಿರುವ ವಿಚಾರ ನನಗೆ ಗೊತ್ತಿಲ್ಲ. ನನ್ನ ಜೊತೆ ಯಾರು ಸಹಿ ಮಾಡಿದ್ದಾರೆ ಎಂದು ನನಗೆ ಗೊತ್ತಿಲ್ಲ.

6) ನಿ ಪಿ 4 ರ ಕಾಲಕ್ಕೆ ಒಂದು ಪೋಟೋ ವನ್ನು ಪೊಲೀಸರು ತೆಗೆದಿದ್ದು ಅದನ್ನು ಸಾಕ್ಷಿಯು ಗುರುತಿಸಿದ್ದರಿಂದ ಪೋಟೋವನ್ನು ನಿ ಪಿ 5 ಎಂದು ಗುರುತಿಸಲಾಯಿತು . ಪೊಲೀಸರ ಕೋರಿಕೆಯ ಮೇರೆಗೆ ನಾನು ಪೋಟೋದಲ್ಲಿ ನಿಂತಿರುತ್ತೇನೆ . ಯಾವ ಕಾರಣಕ್ಕೆ ತೆಗೆದಿರುತ್ತಾರೆ ಎಂದು ನನಗೆ ಗೊತ್ತಿಲ್ಲ .

7) ಸಾಕ್ಷಿಗೆ ಮತ್ತೊಂದು ಪೋಟೋವನ್ನು ತೋರಿಸಿದ್ದು ಅದನ್ನು ಸಾಕ್ಷಿಯು ಗುರುತಿಸಿದ್ದರಿಂದ ಪೋಟೋವನ್ನು ನಿ ಪಿ 6 ಎಂದು ಗುರುತಿಸಲಾಯಿತು .ಪೊಲೀಸರ ಕೋರಿಕೆಯ ಮೇರೆಗೆ ನಾನು ಪೋಟೋದಲ್ಲಿ ನಿಂತಿರುತ್ತೇನೆ . ಯಾವ ಕಾರಣಕ್ಕೆ ತೆಗೆದಿರುತ್ತಾರೆ ಎಂದು ನನಗೆ ಗೊತ್ತಿಲ್ಲ .

8) ಸಾಕ್ಷಿಯು ಈಗ ಮತ್ತೊಂದು ಮಹಜರ್ ನ್ನು ನೋಡುತ್ತಿದ್ದು ಅದರಲ್ಲಿರುವ ತನ್ನ ಸಹಿಯನ್ನು ಗುರುತಿಸಿರುತ್ತಾರೆ. ಮಾಲು ಬಿಡುಗಡೆಯಾದ ಮಹಜರ್ ನ್ನು ನಿಶಾನೆ ಪಿ 7 ಎಂದು ಗುರುತಿಸಲಾಯಿತು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಶಾನೆ ಪಿ 7 (ಎ) ಎಂದು ಗುರುತಿಸಲಾಯಿತು. ಅದು ಯಾವ ದಾಖಲೆ ಎಂದು ನನಗೆ ಗೊತ್ತಿಲ್ಲ, ಸದರಿ ಸಹಿಯನ್ನು ಚನ್ನಗಿರಿ ಪೊಲೀಸ್ ಠಾಣೆಯಲ್ಲಿ ಮಾಡಿರುತ್ತೇನೆ. ಸದರಿ ಮಹಜರ್ ನಲ್ಲಿ ಬರೆದಿರುವ ವಿಚಾರ ನನಗೆ ಗೊತ್ತಿಲ್ಲ. ನನ್ನ ಜೊತೆ ಯಾರು ಸಹಿ ಮಾಡಿದ್ದಾರೆ ಎಂದು ನನಗೆ ಗೊತ್ತಿಲ್ಲ. ನಾನು ಯಾವುದೇ ಮರುಹೇಳಿಕೆಯನ್ನು ನೀಡಿರುವುದಿಲ್ಲ .

**(ಈ ಹಂತದಲ್ಲಿ ಸಾಕ್ಷಿಯು ದೂರು, ಹೇಳಿಕೆ ಮತ್ತು ಮಹಜರ್ ಗೆ ಪ್ರತಿಕೂಲ ಸಾಕ್ಷ್ಯ ನುಡಿದಿದ್ದರಿಂದ ಮಾನ್ಯ ಸಹಾಯಕರ ಸರ್ಕಾರಿ ಅಭಿಯೋಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯಾಗಿ ಪರಿಗಣಿಸಲು ಕೇಳಿಕೊಂಡಿದ್ದು, ದೂರು, ಹೇಳಿಕೆಮತ್ತು ಮಹಜರ್ ನ್ನು ನೋಡಲಾಗಿ ಸಾಕ್ಷಿಯು ದೂರು, ಹೇಳಿಕೆ ಮತ್ತು ಮಹಜರ್ ಗೆ ಪ್ರತಿಕೂಲ ಸಾಕ್ಷಿ ನುಡಿದಿರುವುದು ಕಂಡು ಬರುತ್ತದೆ. ಆದ್ದರಿಂದ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀಸವಾಲು ಮಾಡಲು ಅನುಮತಿ ನೀಡಲಾಯಿತು.)**

**ಪಾಟಿ ಸವಾಲುಃ ಮಾನ್ಯ ಸಹಾಯಕ ಸರ್ಕಾರಿ ಅಬಿಯೋಜಕರವರಿಂದಃ**

1) ದಿಃ 17-01-2023 ರಂದು ಸಂಜೆ 5.00 ಗಂಟೆಯ ಸಮಯದಲ್ಲಿ ನಾನು ನನ್ನ ತೋಟದಲ್ಲಿ ಇರುವಾಗ ಯಾರೋ ಇಬ್ಬರು ಅಪರಿಚಿತರು ನಮ್ಮ ತೋಟಕ್ಕೆ ಬಂದು ನನ್ನ ಬಳಿ ನನಗೆ ವಿಳ್ಳೆದೆಲೆಯನ್ನು ಕೊಡು ಎಂದು ಕೇಳಿದರು ಎಂದರೆ ಸರಿಯಲ್ಲ . ಒಬ್ಬನು

ತೆಳ್ಳಗಿದ್ದು ಉದ್ದಕೂದಲಿನ ಸುಮಾರು 35 ರಿಂದ 45 ವರ್ಷದವನಾಗಿರುತ್ತಾರೆ ಎಂದರೆ ಸರಿಯಲ್ಲ . ಇನ್ನೊಬ್ಬನಿಗೆ 45 ರಿಂದ 50 ವರ್ಷ ಹಾಗೂ ಬಿಳಿ ಗಡ್ಡ ಹಾಗೂ ಕೂದಲು ಇರುತ್ತವೆ ಎಂದರೆ ಸರಿಯಲ್ಲ . ಸದರಿ ಸಮಯದಲ್ಲಿ ನಾನು ಆಯ್ತು ನಮ್ಮ ತೋಟದಲ್ಲಿ ಇರುವುದನ್ನು ಹರಿದುಕೊಂಡು ಹೋಗಿ ಎಂದು ನುಡಿದಿರುತ್ತೇನೆ ಎಂದರೆ ಸರಿಯಲ್ಲ . ಆರೋಪಿಗಳು ನಮ್ಮ ತೋಟದಲ್ಲಿ ಎಲೆಯನ್ನು ಕೀಳುತ್ತಿರುವಾಗ ಅದರಲ್ಲೊಬ್ಬ 45–50 ವರ್ಷದ ಬಿಳಿ ತಲೆ ಕೂದಲು ಹಾಗೂ ಗಡ್ಡದ ಸುತ್ತಲೂ ಯಾರಾದರೂ ನೋಡುತ್ತಾ ಇದ್ದಾರೋ ಇಲ್ಲವೊ ಎಂದು ನನ್ನನ್ನು ನೋಡುತ್ತಿದ್ದು , ಗಾಬರಿಗೊಂಡ ನಾನು ತೋಟದಿಂದ ಮನೆಗೆ ಹೊರಡಬೇಕು ಎನ್ನುವಷ್ಟರಲ್ಲಿ ತೆಳ್ಳಗಿದ್ದ ಸುಮಾರು 35 ರಿಂದ 40 ವರ್ಷದ ಆಸಾಮಿಯು ನನ್ನನ್ನು ಅಡ್ಡ ಹಾಕಿ ತನ್ನ ಬಳಿ ಇದ್ದ ಕುಡುಗೋಲನ್ನು ತೋರಿಸಿ ನಿನ್ನ ಕೊರಳಿನಲ್ಲಿರುವ ಬಂಗಾರದ ಸರವನ್ನು ಕೊಡು ಎಂದು ಹೆದರಿಸಿರುತ್ತಾನೆ ಎಂದರೆ ಸರಿಯಲ್ಲ . ಅದೇ ಸಮಯದಲ್ಲಿ , ನನ್ನ ಜೊತೆ ಮಲಗದಿದ್ದರೆ ಇಲ್ಲೇ ಒಂದು ಗತಿ ಕಾಣಿಸುತ್ತೇನೆ ಎಂದು ಕುಡುಗೋಲನ್ನು ನನ್ನ ಕುತ್ತಿಗೆಯ ಹಿಂಭಾಗಕ್ಕೆ ಹಿಡಿದು ಹೆದರಿಸಿರುತ್ತಾನೆ ಎಂದರೆ ಸರಿಯಲ್ಲ . ಸದರಿ ಸಮಯದಲ್ಲಿ ಆರೋಪಿಗಳಿಂದ ತಪ್ಪಿಸಿಕೊಂಡು ಹೋಗಬೇಕು ಎನ್ನುವಷ್ಟರಲ್ಲಿ ನನ್ನ ಬಟ್ಟೆಯನ್ನು ಎಳೆದಾಡಿರುತ್ತಾರೆ ಎಂದರೆ ಸರಿಯಲ್ಲ . ನಾನು ಕೂಗಾಡುತ್ತಿದ್ದ ಸಮಯದಲ್ಲಿ ಪಕ್ಕದ ತೋಟದಲ್ಲಿ ಇದ್ದ ಚಾಸಾ 8 ರವರು ನನ್ನ ಬಳಿ ಬರುತ್ತಿರುವುದನ್ನು ನೋಡಿ ಆರೋಪಿತರಿಬ್ಬರೂ ನನ್ನ ಕೊರಳಿನಲ್ಲಿ ಇದ್ದ ಸರ ಮತ್ತು ಮೊಬೈಲ್ ನ್ನು ಕಿತ್ತುಕೊಂಡು ಹೋಗಿರುತ್ತಾರೆ ಎಂದರೆ ಸರಿಯಲ್ಲ . ಚಾಸಾ 8 ರವರು ನನಗೆ ಸಮಾಧಾನ ಮಾಡಿ ಮನೆಗೆ ಕರೆದುಕೊಂಡು ಬಂದಿರುತ್ತಾರೆ ಎಂದರೆ ಸರಿಯಲ್ಲ . ನಾನು ಯಾರೋ ಅಪರಿಚಿತರು ಎಲೆ ಕೇಳುವ ನೆಪದಲ್ಲಿ ಬಂದು ನನ್ನ ಕುತ್ತಿಗೆಯಲ್ಲಿದ್ದ ಉಮಾಗೋಲ್ಡ್ ಸರವನ್ನು , ನನ್ನ ಬಳಿ ಇದ್ದ ಮೊಬೈಲ್ ನ್ನು ಕಿತ್ತುಕೊಂಡು ಮಾನಹಾನಿ ಮಾಡಿದವರನ್ನು ಸೂಕ್ತ ಕ್ರಮ ಜರುಗಿಸಿ ಎಂದು ದಿಃ 13–01–2023 ರಂದು ನಿ ಪಿ 1 ರಂತೆ ದೂರನ್ನು ನೀಡಿರುತ್ತೇನೆ ಎಂದರೆ ಸರಿಯಲ್ಲ .

2) ದಿಃ 14–01–2023 ರಂದು ನಾನು ತೋರಿಸಿದ ಸ್ಥಳದಲ್ಲಿ ಪೊಲೀಸರು ಚಾಸಾ 2 ಮತ್ತು 3 ರವರ ಸಮಕ್ಷಮ ಬೆಳಗ್ಗೆ 9.00 ರಿಂದ 10.00 ಗಂಟೆಯವರೆಗೆ ನಿಪಿ 2 ರಂತೆ ಪಂಚನಾಮೆಯನ್ನು ಜರುಗಿಸಿರುತ್ತಾರೆ ಎಂದರೆ ಸರಿಯಲ್ಲ . ನನ್ನ ಜೊತೆ ಚಾಸಾ 2

ಮತ್ತು 3 ರವರು ಸಹಿ ಮಾಡಿರುತ್ತಾರೆ ಎಂದರೆ ಸರಿಯಲ್ಲ . ನಿ ಪಿ 2 ನ್ನು ಜರುಗಿಸುವ ಕಾಲಕ್ಕೆ ನಿ ಪಿ 3 ರಂತೆ ಪೋಟೋವನ್ನು ತೆಗೆದಿರುತ್ತಾರೆ ಎಂದರೆ ಸರಿಯಲ್ಲ .

3) ದಿಃ 14-01-2023 ರಂದು ಪೊಲೀಸ್ ಠಾಣೆಯಲ್ಲಿ ಚಾಸಾ 4 ಮತ್ತು 5 ರವರ ಸಮಕ್ಷಮ ಬೆಳಗ್ಗೆ 11.30 ರಿಂದ 12.00 ಗಂಟೆಯವರೆಗೆ ನಿಪಿ 4 ರಂತೆ ಪಂಚನಾಮೆಯನ್ನು ಜರುಗಿಸಿರುತ್ತಾರೆ ಎಂದರೆ ಸರಿಯಲ್ಲ . ನನ್ನ ಜೊತೆ ಚಾಸಾ 4 ಮತ್ತು 5 ರವರು ಸಹಿ ಮಾಡಿರುತ್ತಾರೆ ಎಂದರೆ ಸರಿಯಲ್ಲ . ನಿ ಪಿ 4 ನ್ನು ಜರುಗಿಸುವ ಕಾಲಕ್ಕೆ ನಿ ಪಿ 5 ರಂತೆ ಪೋಟೋವನ್ನು ತೆಗೆದಿರುತ್ತಾರೆ ಎಂದರೆ ಸರಿಯಲ್ಲ .

4) ನಿ ಪಿ 6 ರನ್ನು ದಿಃ 14-01-2023 ರಂದು ಠಾಣೆಯಲ್ಲಿ ಆರೋಪಿಯನ್ನು ಗುರುತಿಸಿದ ಸಮಯದಲ್ಲಿ ತೆಗೆದ ಭಾವಚಿತ್ರ ವಾಗಿರುತ್ತದೆ ಎಂದರೆ ಸರಿಯಲ್ಲ.

5) ದಿಃ 06-03-2023 ರಂದು ನಿ ಪಿ 7 ರಂತೆ ಪೊಲೀಸ್ ಠಾಣೆಯಲ್ಲಿ ಚಾಸಾ 2 ಮತ್ತು 6 ರವರ ಸಮಕ್ಷಮ ಬೆಳಗ್ಗೆ 11.00 ರಿಂದ 11.30 ಗಂಟೆಯವರೆಗೆ ಪಂಚನಾಮೆಯನ್ನು ಜರುಗಿಸಿರುತ್ತಾರೆ ಎಂದರೆ ಸರಿಯಲ್ಲ . ನನ್ನ ಜೊತೆ ಚಾಸಾ 2 ಮತ್ತು 6 ರವರು ಸಹಿ ಮಾಡಿರುತ್ತಾರೆ ಎಂದರೆ ಸರಿಯಲ್ಲ .

6) ದಿಃ 13-01-2023 ರಂದು ಮಧ್ಯಾಹ್ನ ಸುಮಾರು 4.00 ಗಂಟೆಗೆ -----------------------------------

---ಆರೋಪಿತರನ್ನು ಪುನಃ ನೋಡಿದರೆ ಗುರುತಿಸುತ್ತೇನೆ ಎಂದು ಪೊಲೀಸರಿಗೆ ದಿಃ 16-01-2023 ರಂದು ಹೇಳಿಕೆಯನ್ನು ನೀಡಿರುತ್ತೇನೆ ಎಂದರೆ ಸರಿಯಲ್ಲ .ಅಲ್ಲಗಳೆದ ಹೇಳಿಕೆಯನ್ನು ನಿಪಿ. 8 ಎಂದು ಗುರುತಿಸಲಾಯಿತು. ಆರೋಪಿಗಳು ನಮ್ಮ ತೋಟದಲ್ಲಿ ಕೆಲಸ ಮಾಡುತ್ತಿದ್ದ ಕಾರಣ ಎಲ್ಲಾ ವಿಚಾರ ಗೊತ್ತಿದ್ದರೂ ಸಹ ಆರೋಪಿಗಳಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲು – ಆರೋಪಿತರ ಪರ ವಕೀಲರಿಂದ - ಇರುವುದಿಲ್ಲ.**

**ಮರು ವಿಚಾರಣೆ ಇಲ್ಲ.**

( **ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿಕೆಯನ್ನು ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಪರಿಸಲಾಯಿತು.**)

**ಓ.ಹೇ.ಕೇ. ಸರಿ ಇದೆ.**

**01 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್ ಸಿ,**

**ಚನ್ನಗಿರಿ.**

1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್ ಸಿ , ನ್ಯಾಯಾಧೀಶರವರ

ನ್ಯಾಯಾಲಯ , ಚನ್ನಗಿರಿ .

ಸಿಸಿ ನಂ.**545-2023**

ಹೆಸರುಃ ಸಂತೋಷ್ ಚಾಸಾಃ 2

ತಂದೆಃ ಶಿವಲಿಂಗಪ್ಪ ಪ್ರಾಸಾ: 2

ವಯಸ್ಸುಃ 40

ಉದ್ಯೋಗಃ ವ್ಯವಸಾಯ

ವಾಸ ಸ್ಥಳಃ ಮುದ್ದೇನಹಳ್ಳಿ , ಚನ್ನಗಿರಿ ತಾಲ್ಲೂಕು.

ಸಾಕ್ಷಿಗೆ ದಿನಾಂಕಃ 01-07-2023 ರಂದು ಪ್ರಮಾಣ ವಚನ

**ಮುಖ್ಯ ವಿಚಾರಣೆಃ** ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದಃ

1) ಸಾಕ್ಷಿಯು ಈಗ ಮಹಜರ್ ನ್ನು ನೋಡುತ್ತಿದ್ದು ಅದರಲ್ಲಿರುವ ತನ್ನ ಸಹಿಯನ್ನು ಗುರುತಿಸಿರುತ್ತಾರೆ. ಸದರಿ ಮಹಜರ್ ನ್ನು ಈಗಾಗಲೇ ನಿಶಾನೆ ಪಿ 2 ಎಂದು ಗುರುತಿಸಲಾಗಿದೆ . ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಶಾನೆ ಪಿ 2 (ಬಿ ) ಎಂದು ಗುರುತಿಸಲಾಯಿತು. ಅದು ಯಾವ ದಾಖಲೆ ಎಂದು ನನಗೆ ಗೊತ್ತಿಲ್ಲ, ಸದರಿ ಸಹಿಯನ್ನು ಚನ್ನಗಿರಿ ಪೊಲೀಸ್ ಠಾಣೆಯಲ್ಲಿ ಮಾಡಿರುತ್ತೇನೆ. ಸದರಿ ಮಹಜರ್ ನಲ್ಲಿ ಬರೆದಿರುವ ವಿಚಾರ ನನಗೆ ಗೊತ್ತಿಲ್ಲ. ನನ್ನ ಜೊತೆ ಯಾರು ಸಹಿ ಮಾಡಿದ್ದಾರೆ ಎಂದು ನನಗೆ ಗೊತ್ತಿಲ್ಲ.

2) ನಿ ಪಿ 2 ರ ಕಾಲಕ್ಕೆ ಒಂದು ಪೋಟೋ ವನ್ನು ಪೊಲೀಸರು ತೆಗೆದಿದ್ದು ಅದನ್ನು ಸಾಕ್ಷಿಯು ಗುರುತಿಸಿರುತ್ತಾರೆ . ಸದರೆ ಪೋಟೋವನ್ನು ಈಗಾಗಲೇ ನಿ ಪಿ 3 ಎಂದು ಗುರುತಿಸಲಾಗಿದೆ . ಪೊಲೀಸರ ಕೋರಿಕೆಯ ಮೇರೆಗೆ ನಾನು ಪೋಟೋದಲ್ಲಿ ನಿಂತಿರುತ್ತೇನೆ . ಯಾವ ಕಾರಣಕ್ಕೆ ತೆಗೆದಿರುತ್ತಾರೆ ಎಂದು ನನಗೆ ಗೊತ್ತಿಲ್ಲ .

3) ಸಾಕ್ಷಿಯು ಈಗ ಮತ್ತೊಂದು ಮಹಜರ್ ನ್ನು ನೋಡುತ್ತಿದ್ದು ಅದರಲ್ಲಿರುವ ತನ್ನ ಸಹಿಯನ್ನು ಗುರುತಿಸಿರುತ್ತಾರೆ. ವಶಪಡಿಸಿಕೊಂಡ ಸರವನ್ನು ಪರಿಶೀಲಿಸಿದ ಮಹಜರ್ ನ್ನು ನಿಶಾನೆ ಪಿ 4 ಎಂದು ಗುರುತಿಸಲಾಯಿತು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಶಾನೆ ಪಿ 4 (ಎ) ಎಂದು ಗುರುತಿಸಲಾಯಿತು. ಅದು ಯಾವ ದಾಖಲೆ ಎಂದು ನನಗೆ ಗೊತ್ತಿಲ್ಲ, ಸದರಿ ಸಹಿಯನ್ನು ಚನ್ನಗಿರಿ ಪೊಲೀಸ್ ಠಾಣೆಯಲ್ಲಿ ಮಾಡಿರುತ್ತೇನೆ. ಸದರಿ ಮಹಜರ್ ನಲ್ಲಿ ಬರೆದಿರುವ ವಿಚಾರ ನನಗೆ ಗೊತ್ತಿಲ್ಲ. ನನ್ನ ಜೊತೆ ಯಾರು ಸಹಿ ಮಾಡಿದ್ದಾರೆ ಎಂದು ನನಗೆ ಗೊತ್ತಿಲ್ಲ.

4) ಸಾಕ್ಷಿಯು ಈಗ ಮತ್ತೊಂದು ಮಹಜರ್ ನ್ನು ನೋಡುತ್ತಿದ್ದು ಅದರಲ್ಲಿರುವ ತನ್ನ ಸಹಿಯನ್ನು ಗುರುತಿಸಿರುತ್ತಾರೆ. ಮಾಲು ಬಿಡುಗಡೆಯಾದ ಮಹಜರ್ ನ್ನು ಈಗಾಗಲೇ ನಿಶಾನೆ ಪಿ 7 ಎಂದು ಗುರುತಿಸಲಾಗಿದೆ . ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಶಾನೆ ಪಿ 7 (ಬಿ ) ಎಂದು ಗುರುತಿಸಲಾಯಿತು. ಅದು ಯಾವ ದಾಖಲೆ ಎಂದು ನನಗೆ ಗೊತ್ತಿಲ್ಲ, ಸದರಿ ಸಹಿಯನ್ನು ಚನ್ನಗಿರಿ ಪೊಲೀಸ್ ಠಾಣೆಯಲ್ಲಿ ಮಾಡಿರುತ್ತೇನೆ. ಸದರಿ ಮಹಜರ್ ನಲ್ಲಿ ಬರೆದಿರುವ ವಿಚಾರ ನನಗೆ ಗೊತ್ತಿಲ್ಲ. ನನ್ನ ಜೊತೆ ಯಾರು ಸಹಿ ಮಾಡಿದ್ದಾರೆ ಎಂದು ನನಗೆ ಗೊತ್ತಿಲ್ಲ. ನಾನು ಯಾವುದೇ ಮರುಹೇಳಿಕೆಯನ್ನು ನೀಡಿರುವುದಿಲ್ಲ .

**(ಈ ಹಂತದಲ್ಲಿ ಸಾಕ್ಷಿಯು ಮಹಜರ್ ಗಳಿಗೆ ಪ್ರತಿಕೂಲ ಸಾಕ್ಷ್ಯ ನುಡಿದಿದ್ದರಿಂದ ಮಾನ್ಯ ಸಹಾಯಕರ ಸರ್ಕಾರಿ ಅಭಿಯೋಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯಾಗಿ ಪರಿಗಣಿಸಲು ಕೇಳಿಕೊಂಡಿದ್ದು, ಮಹಜರ್ ಗಳನ್ನು ನೋಡಲಾಗಿ ಸಾಕ್ಷಿಯು ಮಹಜರ್ ಗಳಿಗೆ ಗ ಪ್ರತಿಕೂಲ ಸಾಕ್ಷಿ ನುಡಿದಿರುವುದು ಕಂಡು ಬರುತ್ತದೆ. ಆದ್ದರಿಂದ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀಸವಾಲು ಮಾಡಲು ಅನುಮತಿ ನೀಡಲಾಯಿತು.)**

**ಪಾಟಿ ಸವಾಲುಃ ಮಾನ್ಯ ಸಹಾಯಕ ಸರ್ಕಾರಿ ಅಬಿಯೋಜಕರವರಿಂದಃ**

5) ದಿಃ 14-01-2023 ರಂದು ಚಾಸಾ 1 ರವರು ತೋರಿಸಿದ ಸ್ಥಳದಲ್ಲಿ ಪೊಲೀಸರು ನಾನು ಮತ್ತು 3 ರವರ ಸಮಕ್ಷಮ ಬೆಳಗ್ಗೆ 9.00 ರಿಂದ 10.00

ಗಂಟೆಯವರೆಗೆ ನಿಪಿ 2 ರಂತೆ ಪಂಚನಾಮೆಯನ್ನು ಜರುಗಿಸಿರುತ್ತಾರೆ ಎಂದರೆ ಸರಿಯಲ್ಲ . ನನ್ನ ಜೊತೆ ಚಾಸಾ 1 ಮತ್ತು 3 ರವರು ಸಹಿ ಮಾಡಿರುತ್ತಾರೆ ಎಂದರೆ ಸರಿಯಲ್ಲ . ನಿ ಪಿ 2 ನ್ನು ಜರುಗಿಸುವ ಕಾಲಕ್ಕೆ ನಿ ಪಿ 3 ರಂತೆ ಪೋಟೋವನ್ನು ತೆಗೆದಿರುತ್ತಾರೆ ಎಂದರೆ ಸರಿಯಲ್ಲ .

6) ದಿಃ 06-03-2023 ರಂದು ನಿ ಪಿ 7 ರಂತೆ ಪೊಲೀಸ್ ಠಾಣೆಯಲ್ಲಿ ನನ್ನ , ಚಾಸಾ 1 ಮತ್ತು 6 ರವರ ಸಮಕ್ಷಮ ಬೆಳಗ್ಗೆ 11.00 ರಿಂದ 11.30 ಗಂಟೆಯವರೆಗೆ ಪಂಚನಾಮೆಯನ್ನು ಜರುಗಿಸಿರುತ್ತಾರೆ ಎಂದರೆ ಸರಿಯಲ್ಲ . ನನ್ನ ಜೊತೆ ಚಾಸಾ 1 ಮತ್ತು 6 ರವರು ಸಹಿ ಮಾಡಿರುತ್ತಾರೆ ಎಂದರೆ ಸರಿಯಲ್ಲ . ಎಲ್ಲಾ ವಿಚಾರ ಗೊತ್ತಿದ್ದರೂ ಸಹ ಆರೋಪಿಗಳಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲು – ಆರೋಪಿತರ ಪರ ವಕೀಲರಿಂದ - ಇರುವುದಿಲ್ಲ.**

**ಮರು ವಿಚಾರಣೆ ಇಲ್ಲ.**

**( ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿಕೆಯನ್ನು ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಪರಿಸಲಾಯಿತು.)**

**ಓ.ಹೇ.ಕೇ. ಸರಿ ಇದೆ.**

**01 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್ ಸಿ,**

**ಚನ್ನಗಿರಿ.**